ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 12-03-2021 ಪ್ರಶ್ನೆ ಸಂಖ್ಯೆ : 850 (1153)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 12-03-2021

ಉತ್ತರಿಸುವ ಸಚಿವರು : ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು

ವಿಷಯ : ಉದ್ಯೋಗಿನಿ ಯೋಜನೆಯ ಬಗ್ಗೆ

(ಅ) ಮಂಡ್ಯ ಜಿಲ್ಲೆಯಲ್ಲಿ ನಿರುದ್ಯೋಗಿ ಮಹಿಳೆಯರನ್ನು ಗುರುತಿಸಲಾಗಿದೆಯೇ; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಉದ್ಯೋಗಿನಿ ಯೋಜನೆಯಡಿಯಲ್ಲಿ ಮಂಡ್ಯ ಜಿಲ್ಲೆಯಲ್ಲಿ ಎಷ್ಟು ಮಹಿಳಾ ಫಲಾನುಭವಿಗಳನ್ನು ಪ್ರಸಕ್ತ ಸಾಲಿನಲ್ಲಿ ಆಯ್ಕೆಮಾಡಲಾಗಿದೆ; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಮಂಡ್ಯ ಜಿಲ್ಲೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ನಿರುದ್ಯೋಗಿ ಮಹಿಳೆಯರಿದ್ದು, ಪ್ರಸಕ್ತ ಸಾಲಿನಲ್ಲಿ ನಿಗದಿಪಡಿಸಿರುವ ಫಲಾನುಭವಿಗಳ ಸಂಖ್ಯೆ ಕಡಿಮೆ ಇದ್ದು, ಈ ಫಲಾನುಭವಿಗಳ ಸಂಖ್ಯೆಯನ್ನು ಹೆಚ್ಚಿಸಲು ಸರ್ಕಾರ ಯಾವ ಕ್ರಮವನ್ನು ಕೈಗೊಂಡಿದೆ; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)